ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 18–12–2014

**ಪತ್ರಿಕಾ ಆಮಂತ್ರಣ**

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಪತ್ರಿಕಾಗೋಷ್ಠಿ:<br><br>ಶ್ರೀ ಪುಂಡಲೀಕ ಹಾಲಂಬಿ, ಅಧ್ಯಕ್ಷತು<br>ಕನ್ನಡ ಸಾಹಿತ್ಯ ಪರಿಷತ್ತು | 19–12–2014<br>ಶುಕ್ರವಾರ<br>ಮಧ್ಯಾಹ್ನ<br>3–30 ಗಂಟೆಗೆ | ಪಂಪ ಸಭಾಂಗಣ,<br>ಕನ್ನಡ ಸಾಹಿತ್ಯ ಪರಿಷತ್ತು,<br>ಪಂಪಮಹಾಕವಿ ರಸ್ತೆ,<br>ಚಾಮರಾಜಪೇಟೆ,<br>ಬೆಂಗಳೂರು–560 018 |
| 2 | Lecture series on “Smart Power Flow Controller for Smart Grid Applications”<br><br>by<br><br>Dr. Kalyan K. Sen<br><br>IEEE Pittsburgh Power Electronics Chapter | 19-12-2014<br><br>Friday<br><br>11.00 A.M. | Auditorium,<br>Visvesvaraya Industrial and Technological Museum<br>Kasturba Road,<br>Bangalore |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

## ಜೂನ್ ಒಳಗೆ ತುಂಬೆ ವೆಂಟೆಡ್ ಡ್ಯಾಂ ಕಾಮಗಾರಿ ಪೂರ್ಣ

**ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):–**

ಮಂಗಳೂರಿನ ತುಂಬೆ ವೆಂಟೆಡ್ ಡ್ಯಾಂ ಕಾಮಗಾರಿಯನ್ನು 2015 ನೇ ಜೂನ್ ಮಾಹೆಯೊಳಗೆ ಪೂರ್ಣಗೊಳಿಸಲಾಗುವುದೆಂದು ನಗರಾಭಿವೃದ್ಧಿ ಸಚಿವರಾದ ವಿನಯಕುಮಾರ್ ಸೊರಕೆ ಅವರು ಹೇಳಿದರು.

ವಿಧಾನ ಪರಿಷತ್‌ನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಐವನ್ ಡಿಸೋಜಾ ಅವರು ತುಂಬೆ ವೆಂಟೆಡ್ ಡ್ಯಾಂ ನಿರ್ಮಾಣ ಕಾಮಗಾರಿಯನ್ನು ಶೀಘ್ರದಲ್ಲಿ ಪೂರ್ಣಗೊಳಿಸದಿದ್ದರೆ, ಮುಂದಿನ ವರ್ಷದಲ್ಲಿ ಮಂಗಳೂರಿನ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗಲಿದೆ ಎಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು

ಮಳೆಗಾಲದ ಕಾರಣ ನಾಲ್ಕು ತಿಂಗಳ ಕಾಲ ಕಾಮಗಾರಿಯನ್ನು ಸ್ಥಗಿತಗೊಳಿಸಲಾಗಿತ್ತು. ಮಹಾನಗರ ಪಾಲಿಕೆಯವರೇ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಬೇಕಿತ್ತು. ಅವರಿಂದ ಸಾಧ್ಯವಾಗದ ಕಾರಣ ಜಲಮಂಡಳಿ ಮೂಲಕ ತ್ವರಿತ ಗತಿಯಲ್ಲಿ ಕಾಮಗಾರಿಯನ್ನು ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ನಗರಪಾಲಿಕೆಯ ಸದಸ್ಯರುಗಳಿಗೆ ಕನಿಷ್ಠ 10,000 ರೂ. ಗೌರವಧನವನ್ನು ನೀಡುವ ಬಗ್ಗೆ ಸಹ ಪರಿಶೀಲಿಸಲಾಗುತ್ತಿದ್ದು, ಈ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಮುಂದಿನ ತೀರ್ಮಾನಿಸಲಾಗುವುದೆಂದು ಸಚಿವರು ಇದೇ ಸಂದರ್ಭದಲ್ಲಿ ಸದಸ್ಯರ ಪ್ರಶ್ನೆಗೆ ಉತ್ತರಿಸಿದರು.

# ಮುಜರಾಯಿ ಇಲಾಖೆ ವ್ಯಾಪ್ತಿಯ ಶಾಲೆಗಳು ಶಿಕ್ಷಣ ಇಲಾಖೆಗೆ ವರ್ಗಾವಣೆ

**ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):-**

ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ದೇವಾಲಯಗಳ ಆಡಳಿತದಲ್ಲಿ ನಡೆಯುತ್ತಿರುವ ಎಲ್ಲಾ ಶಾಲೆಗಳನ್ನು ಶಿಕ್ಷಣ ಇಲಾಖೆಗೆ ವರ್ಗಾವಣೆ ಮಾಡಲಾಗುವುದೆಂದು ಮುಜರಾಯಿ ಇಲಾಖೆ ಸಚಿವರಾದ ಟಿ.ಬಿ.ಜಯಚಂದ್ರ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಕೆ. ಪ್ರತಾಪಚಂದ್ರ ಶೆಟ್ಟಿ ಅವರು ಮುಜರಾಯಿ ಇಲಾಖೆ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋದಕ ಹಾಗೂ ಬೋದಕೇತರ ಸಿಬ್ಬಂದಿಯವರಿಗೆ ಇರುವ ವೇತನ ತಾರತಮ್ಯವನ್ನು ಸರಿಪಡಿಸಬೇಕೆಂದು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು. ವೇತನ ತಾರತಮ್ಯ ನಿವಾರಣೆಗೆ ಅಂದಾಜು 3 ಕೋಟಿ ರೂ.ಗಳಷ್ಟು ಹಣದ ಅವಶ್ಯತೆ ಇದೆ. ಆದರೆ ದೇವಾಲಯದ ಆಡಳಿತದಿಂದ ಇಷ್ಟು ಪ್ರಮಾಣದ ಹಣವನ್ನು ಭರಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಈ ಶಾಲೆಗಳನ್ನು ಶಿಕ್ಷಣ ಇಲಾಖೆಗೆ ವರ್ಗಾಯಿಸಲು ಸರ್ಕಾರವು ತೀರ್ಮಾನಕ್ಕೆ ಬಂದಿದೆ ಎಂದರು.

ರಾಜ್ಯದಲ್ಲಿ 6 ಅನುದಾನಿತ ಶಿಕ್ಷಣ ಸಂಸ್ಥೆಯಲ್ಲಿ 62 ಬೋದಕರು, 63 ಭೋದಕೇತರ ಸಿಬ್ಬಂದಿ ಮತ್ತು 12 ಅನುದಾನ ರಹಿತ ಶಿಕ್ಷಣ ಸಂಸ್ಥೆಯಲ್ಲಿ 78 ಭೋದಕರು, 28 ಬೋದಕೇತರ ಸಿಬ್ಬಂದಿಯವರು ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಬರುವ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರಿಗೆ ಅನ್ಯಾಯವಾಗದಂತೆ ಸರ್ಕಾರವು ಕ್ರಮಕೈಗೊಳ್ಳಲಿದೆ ಎಂದರು.

ಶಿಕ್ಷಣ ಇಲಾಖೆಯ ಒಪ್ಪಿಗೆಯ ಮೇರೆಗೇ ಈ ಶಾಲೆಗಳನ್ನು ನಡೆಸಲಾಗುತ್ತದೆ. ಹಾಗೆಯೇ ಜಿಲ್ಲಾಡಳಿತದಿಂದ ಈ ಶಿಕ್ಷಣ ಸಂಸ್ಥೆಗಳಿಗೆ ಬೋದಕ, ಬೋದಕೇತರ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲಾಗಿದೆ. ಶಾಲೆಗಳನ್ನು ಶಿಕ್ಷಣ ಇಲಾಖೆಗೆ ವರ್ಗಾಯಿಸುವ ಸಂದರ್ಭದಲ್ಲಿ ದೇವಾಲಯದ ಆಸ್ತಿಯಾಗಿರುವ ಶಾಲಾ ಆವರಣವನ್ನು ವರ್ಗಾಯಿಸುವ ಬಗ್ಗೆ ಮುಜರಾಯಿ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ನಡುವೆ ಗೊಂದಲವುಂಟಾಗಿದೆ. ಆದ್ದರಿಂದ ಎರಡೂ ಇಲಾಖೆಗಳೊಂದಿಗೆ ಚರ್ಚಿಸಿದ ನಂತರ ದೇವಾಲಯದ ಆಡಳಿತದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಣ ಸಂಸ್ಥೆಗಳನ್ನು ಶಿಕ್ಷಣ ಇಲಾಖೆಗೆ ವರ್ಗಾಯಿಸಲಾಗುವುದೆಂದು ಸಚಿವರು ತಿಳಿಸಿದರು.

# ಯಾವುದೇ ಕಾರಣಕ್ಕೂ ಕೈಗಾರಿಕೆಗಳು ರಾಜ್ಯದಿಂದ ಕೈತಪ್ಪಿ ಹೋಗಲು ಬಿಡುವುದಿಲ್ಲ

## -:ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):-**

ಯಾವುದೇ ಕಾರಣಕ್ಕೂ ಕೈಗಾರಿಕೆಗಳು ರಾಜ್ಯದಿಂದ ಕೈತಪ್ಪಿ ನೆರಯ ರಾಜ್ಯಕ್ಕೆ ಹೋಗಲು ಅವಕಾಶ ನೀಡುವುದಿಲ್ಲವೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆ ನೀಡಿದರು.

ವಿಧಾನ ಪರಿಷತ್‌ನಲ್ಲಿಂದು ಸದಸ್ಯೆ ತಾರಾ ಅನುರಾಧ ಅವರು ಧಾರವಾಡದಲ್ಲಿ ಸ್ಥಾಪನೆಗೊಳ್ಳಬೇಕಿದ್ದ. ಮೆ॥ ಹೀರೋ ಮೋಟೋ ಕಾರ್ಪ್ಸ್ ಲಿಮಿಟೆಡ್ ಕಂಪನಿಯು ಹೈದರಾಬಾದ್‌ಗೆ ಹೋಗಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಯವರು ಹೀರೋ ಹೋಂಡಾ ಕಂಪನಿಯವರು ತಪ್ಪು ನಿರ್ಧಾರ ಮಾಡಿ ನಮ್ಮ ರಾಜ್ಯವನ್ನು ಬಿಟ್ಟು ನೆರೆಯ ರಾಜ್ಯಕ್ಕೆ ಹೋಗಿದ್ದಾರೆ. ಅವರೇ ಮತ್ತೆ ನಮ್ಮ ರಾಜ್ಯಕ್ಕೆ ಮರುಳುತ್ತಾರೆ ನೋಡಿ ಎಂದರು.

ಆಂಧ್ರಕ್ಕೆ ರಾಜ್ಯದಿಂದ ಒಂದು ಕೈಗಾರಿಕೆ ಹೋದರೆ ಅಲ್ಲಿಂದ 50 ಔಷಧ ಕಂಪನಿಗಳು ನಮ್ಮ ರಾಜ್ಯದಲ್ಲಿ ಕಂಪನಿ ಸ್ಥಾಪಿಸಲು ಮುಂದೆ ಬಂದಿವೆ. ಹೀರೋ ಹೋಂಡಾ ಕಂಪನಿಯವರಿಗೆ ಸರ್ಕಾರದ ವತಿಯಿಂದ 300 ಎಕರೆ ಜಮೀನನ್ನು ಮಂಜೂರು ಮಾಡಲಾಗಿತ್ತು. ಹೆಚ್ಚುವರಿಯಾಗಿ 200 ಎಕರೆ ಜಮೀನು ನೀಡಲು ನಿರ್ಧರಿಸಲಾಗಿತ್ತು. ಹಾಗೆಯೇ ಹೊಸ ಕೈಗಾರಿಕಾ ನೀತಿಯಡಿ ನೀಡಬಹುದಾದ ಎಲ್ಲಾ ಸವಲತ್ತುಗಳನ್ನು ನೀಡಲು ಸರ್ಕಾರವು ಬದ್ಧವಾಗಿತ್ತು. ಆದಾಗ್ಯೂ ಅವರು ನೆರೆ ರಾಜ್ಯಕ್ಕೆ ಹೋಗಿದ್ದಾರೆ. ಆಂಧ್ರ ಸರ್ಕಾರ ಉಚಿತ ಭೂಮಿ ತೆರಿಗೆ ವಿನಾಯಿತಿಯ ಭರವಸೆಯನ್ನು ನಂಬಿ ಹೋಗಿದ್ದಾರೆ. ಸಧ್ಯದಲ್ಲೇ  ತಪ್ಪಿನ ಅರಿವಾಗಿ ಕಂಡಿತವಾಗಿಯೂ ಅವರು ಮತ್ತೆ ನಮ್ಮ ರಾಜ್ಯಕ್ಕೆ ಬರುತ್ತಾರೆಂದು ಮುಖ್ಯಮಂತ್ರಿಯವರು ಹೇಳಿದರು.

ರಾಜ್ಯ ಸರ್ಕಾರವು ತಯಾರಿಸಿರುವ ಹೊಸ ಕೈಗಾರಿಕಾ ನೀತಿ 2014-19 ರಲ್ಲಿ ಹೈದರಾಬಾದ್ ಕರ್ನಾಟಕದ ಜಿಲ್ಲೆಗಳಿಗೆ ಹೆಚ್ಚುವರಿ ರಿಯಾಯಿತಿ ಮತ್ತು ಉತ್ತೇಜನವನ್ನು ಪ್ರಕಟಿಸಲಾಗಿದೆ. ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ, ಮಹಿಳೆಯರು, ಹಿಂದುಳಿದ ವರ್ಗದವರಿಗೆ ಆಕರ್ಷಕ ಸಬ್ಸಿಡಿಯನ್ನು ನೀಡಲಾಗಿದೆ. ಅಲ್ಲದೆ ಆಂಧ್ರ ಮತ್ತು ತೆಲಂಗಾಣ ರಾಜ್ಯಗಳಿಗೆ ನೀಡುವಂತಹ ವಿಶೇಷ ಕೈಗಾರಿಗಾ ಪ್ಯಾಕೇಜ್ ಅನ್ನು ನಮ್ಮ ರಾಜ್ಯಕ್ಕೂ ನೀಡುವಂತೆ ಪ್ರಧಾನಿಯವರಿಗೆ  ಕೋರಿದ್ದೇನೆ ಎಂದು ತಿಳಿಸಿದರು.

ಸದಸ್ಯೆ ತಾರಾ ಅವರಿಗೆ ಯಾರೋ ತಪ್ಪು ಮಹಿತಿ ನೀಡಿದ್ದಾರೆ, ಅಥವಾ ಈ ಬಗ್ಗೆ ಅಪಪ್ರಚಾರವಾಗಿದೆ. ಸರ್ಕಾರವು ಯವುದೇ ಕಾರಣಕ್ಕೂ ಕೈಗಾರಿಕೆಗಳು ರಾಜ್ಯದಿಂದ ತಪ್ಪಿ ಹೋಗಲು ಬಿಡುವುದಿಲ್ಲ. ಆದ್ದರಿಂದ ತಾವು ಈ ಬಗ್ಗೆ ನಿಶ್ಚಿಂತೆಯಿಂದ ಇರಬಹುದೆಂದು ಮುಖ್ಯಮಂತ್ರಿಯವರು ಭರವಸೆ ನೀಡಿದರು.

# ಲೋಕಾಯುಕ್ತ ಕಾಯ್ದೆಗೆ ತಿದ್ದುಪಡಿಗೆ ಪರಿಶೀಲನೆ

## -:ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):-**

ಲೋಕಾಯುಕ್ತ ಕಾಯ್ದೆಗೆ ತಿದ್ದುಪಡಿ ತರುವ ಕುರಿತಂತೆ ಪರಿಶೀಲನೆ ಮಾಡಲಾಗುವುದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿಂದು ಸದಸ್ಯ ವಿ.ಎಸ್. ವೀರಯ್ಯ ಅವರು ಲೋಕಾಯುಕ್ತದಲ್ಲಿ ದಾಖಲಾಗುವ ದೂರುಗಳ ವಿಲೇವಾರಿ ವಿಳಂಬವಾಗುತ್ತಿರುವ ಕಾರಣ ಲೋಕಾಯುಕ್ತ ಕಾಯ್ದೆಯನ್ನು ಬಲಪಡಿಸುವ ನಿಟ್ಟಿನಲ್ಲಿ ತಿದ್ದುಪಡಿ ತರುವಂತೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಯವರು ಲೋಕಾಯುಕ್ತ ಕಾಯ್ದೆಗೆ ತಿದ್ದುಪಡಿ ಮಾಡುವ ಅಗತ್ಯವಿಲ್ಲ. ಲೋಕಾಯುಕ್ತ ಸಂಸ್ಥೆಯು ಸ್ವತಂತ್ರವಾಗಿರುವುದರಿಂದ ಸರ್ಕಾರವು ನಿರ್ದೇಶನ ಮಾಡಲು ಬರುವುದಿಲ್ಲ. ಹಾಗೆಯೇ ಕೋರ್ಟ್ ನಲ್ಲಿರುವ ಲೋಕಾಯುಕ್ತ ಪ್ರಕರಣಗಳ ಬಗ್ಗೆಯೂ ಸರ್ಕಾರವು ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ. ಆದಾಗ್ಯೂ ಸದಸ್ಯರ ಅಭಿಪ್ರಾಯದಂತೆ ಈ ಕುರಿತು ಚರ್ಚಿಸಲಾಗುವುದು ಎಂದು ತಿಳಿಸಿದರು.

1998 ರಿಂದ 2004 ರವರೆಗೆ 574 ಲೋಕಾಯುಕ್ತ ದಾಳಿ ಪ್ರಕರಣಗಳು ದಾಖಲಾಗಿವೆ. ಈ ಪೈಕಿ 136 ಪ್ರಕರಣಗಳು ಇತ್ಯರ್ಥಗೊಂಡಿದ್ದು, 438 ಪ್ರಕರಣಗಳು ನ್ಯಾಯಾಲಯದಲ್ಲಿ ವಿವಿಧ ಕಾರಣಗಳಿಗಾಗಿ ಬಾಕಿ ಉಳಿದಿವೆ. ದಾಳಿಯ ಪ್ರಕರಣದಲ್ಲಿ 13,80,87,876 ರೂ ನಗದು, 780,09,03,193 ರೂ ಮೊತ್ತದ ಆಸ್ತಿ ಹಾಗೂ 43,59,64,577ರೂ ಮೊತ್ತದ ಒಡವೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ವಿವರಿಸಿದರು.

## ಗುಡ್ಡಾಪುರ– ಪಂಡರಾಪುರ ಕ್ಷೇತ್ರಗಳಲ್ಲಿ ಯಾತ್ರಿನಿವಾಸ

**ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):–**

ಮಹಾರಾಷ್ಟ್ರದ ರಾಜ್ಯದ ಜತ್ತ ತಾಲೂಕಿನಲ್ಲಿರುವ ಶೀ ಕ್ಷೇತ್ರ ಗುಡ್ಡಾಪುರದ ದಾನಮ್ಮ ದೇವಸ್ಥಾನ ಹಾಗೂ ಪಂಡರಾಪುರದ ದೇವಾಲಯಕ್ಕೆ ಬರುವ ರಾಜ್ಯದ ಯಾತ್ರಾತ್ರಿಗಳಿಗೆ ಅನುಕೂಲಮಾಡಿಕೊಡಲು ಯಾತ್ರಿನಿವಾಸ ನಿರ್ಮಾಣ ಮಾಡಲಾಗುವುದೆಂದು ಮುಜರಾಯಿ ಖಾತೆ ಸಚಿವ ಟಿ.ಬಿ. ಜಯಚಂದ್ರ ಅವರು ಭರವಸೆ ನೀಡಿದರು.

ವಿಧಾನ ಪರಿಷತ್‌ನಲ್ಲಿಂದು ಸದಸ್ಯ ಮಹಾಂತೇಶ್ ಕವಟಗಿ ಮಠ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು ಈ ಎರಡೂ ಕ್ಷೇತ್ರಗಳಲ್ಲಿ ಯಾತ್ರಿನಿವಾಸ ನಿರ್ಮಾಣಕ್ಕೆ ನಿವೇಶನ ಪಡೆಯಲಾಗಿದೆ ಎಂದು ತಿಳಿಸಿದರು.

ಗುಡ್ಡಾಪುರದಲ್ಲಿ ನಿರ್ಮಿಸಲು ಉದ್ದೇಶಿಸಲಾದ ಯಾತ್ರಿನಿವಾಸ ಕಟ್ಟಡ ನಿರ್ಮಾಣಕ್ಕೆ 2012ರಲ್ಲಿ ಲೋಕೋಪಯೋಗಿ ಇಲಾಖೆ 12 ಕೋಟಿ ರೂ ಅಂದಾಜು ಪಟ್ಟಿ ತಯಾರಿಸಲಾಗಿತ್ತು. ಈಗಾಗಲೇ 25 ಲಕ್ಷ ವೆಚ್ಚದಲ್ಲಿ ನಿವೇಶನ ಸುತ್ತ ಆವರಣ ಗೋಡೆಯನ್ನು ನಿರ್ಮಿಸಲಾಗಿದೆ. ಲೋಕೋಪಯೋಗಿ ಇಲಾಖೆಗೆ ಪರಿಷ್ಕೃತ ಅಂದಾಜು ಪಟ್ಟಿಯನ್ನು ತಯಾರಿಸುವಂತೆ ಕೋರಲಾಗಿದೆ ಎಂದು ಸಚಿವರು ತಿಳಿಸಿದರು.

## ಕೆರೆ ಒತ್ತುವರಿ ತೆರೆವಿಗೆ ಸರ್ಕಾರ ಬದ್ಧ

:ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):–**

ಬೆಂಗಳೂರು ನಗರದಲ್ಲಿ ಕೆರೆ ಒತ್ತುವರಿ ತೆರವುಗೊಳಿಸಲು ಸರ್ಕಾರ ಬದ್ಧವಾಗಿದೆ, ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ವಿಧಾನ ಪರಿಷತ್‌ನಲ್ಲಿಂದು ಸದಸ್ಯ ರಾಮಚಂದ್ರೇಗೌಡ ಅವರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಯವರು, ಯಾವುದೇ ಕಾರಣಕ್ಕೂ ಕೆರೆ ಒತ್ತುವರಿ ಮಾಡಿರುವವರು ಎಷ್ಟೇ ಪ್ರಬಲ ರಾಜಕಾರಣಿಗಳು , ಹಣವಂತರು, ಶಕ್ತಿವಂತರಾಗಿದ್ದರೂ ಅವರಿಗೆ ಮಣಿಯದೆ ಒತ್ತುವರಿಯನ್ನು ತೆರವುಗೊಳಿಸಲಿದೆ. ಒಂದೊಮ್ಮೆ ಒತ್ತುವರಿದಾರರು ತೆರವು ಕಾರ್ಯಾಚರಣೆ ವಿರುದ್ಧ ನ್ಯಾಯಾಲದ ಮೆಟ್ಟಿಲೇರಿದಲ್ಲಿ, ಸರ್ಕಾರವೂ ನ್ಯಾಯಾಲಯದಲ್ಲಿ ಕಾನೂನಾತ್ಮಕ ಹೋರಟ ನಡೆಸಲಿದೆ ಎಂದು ಹೇಳಿದರು.

ಈಗಾಗಲೇ ಕೆರೆಗಳ ಒತ್ತುವರಿ ಮಾಹಿತಿ ಸಂಗ್ರಹಿಸಲು ಶಾಸಕ ಕೋಳಿವಾಡ್ ಅವರ ಅಧ್ಯಕ್ಷತೆಯಲ್ಲಿ ಸದನ ಸಮಿತಿಯನ್ನು ರಚಿಸಲಾಗಿದೆ. ಪ್ರತಿ ಶನಿವಾರ ಮತ್ತು ಭಾನುವಾರ ಕೆರೆ ಒತ್ತುವರಿ ತೆರವುಗೊಳಿಸುವ ಕಾರ್ಯಾಚರಣೆಯನ್ನು ಕೈಗೊಳ್ಳಲಾಗುತ್ತಿದೆ. ಈ ಕಾರ್ಯಕ್ಕಾಗಿ ಬೆಂಗಳೂರು ಜಿಲ್ಲಾಧಿಕಾರಿ ಹಾಗೂ ಇಬ್ಬರು ವಿಶೇಷ ಜಿಲ್ಲಾಧಿಕಾರಿಗಳನ್ನು ನೇಮಿಸಲಾಗಿದೆ.

ಬೆಂಗಳೂರಿನ 123 ಕೆರೆಗಳ ಪೈಕಿ 118 ಕೆರೆಗಳನ್ನು ಅಭಿವೃದ್ಧಿ ಪಡಿಸಲು ಮಹಾನಗರ ಪಾಲಿಕೆಯಿಂದ ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಲಾಗಿದೆ. ಈ ಪೈಕಿ ಹೊಸಕೆರೆಹಳ್ಳಿಯ ಕೆರೆಯನ್ನು ಕೂಡ ಹಸ್ತಾಂತರಿಸಲಾಗಿದೆ. ಇದರಲ್ಲಿ 6.17 ಎಕರೆ ಕೆರೆ ಒತ್ತುವರಿಯನ್ನು ತೆರವುಗೊಳಿಸಿ ಕೆರೆಯ ಅಭಿವೃದ್ಧಿಗೆ ಹಾಗೂ ಕೆರೆಯಲ್ಲಿ ತ್ಯಾಜ್ಯ ನೀರು ಸಂಸ್ಕರಣ ಘಟಕವನ್ನು ಸ್ಥಾಪಿಸುವ ಕುರಿತಂತೆ ಕ್ರಮಕೈಗೊಳ್ಳಲಾಗುವುದೆಂದು ಮುಖ್ಯಮಂತ್ರಿಗಳು ತಿಳಿಸಿದರು.

## ಒಂಬತ್ತು ತಿಂಗಳಲ್ಲಿ 1406 ಕೋಟಿ ರೂ ಪಾಲಿಕೆ ತೆರಿಗೆ ಸಂಗ್ರಹ

:ಮುಖ್ಯಮಂತ್ರಿ ಸಿದ್ಧರಾಮಯ್ಯ

ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರಸಕ್ತ ಸಾಲಿನ ಡಿಸೆಂಬರ್‌ವರೆಗೆ 1406 ಕೋಟಿ ರೂ ತೆರಿಗೆ ಸಂಗ್ರಹಿಸಿದ್ದು, ಈ ಆರ್ಥಿಕ ವರ್ಷಾಂತ್ಯಕ್ಕೆ ಇನ್ನೂ ಒಂದು ಸಾವಿರ ಕೋಟಿ ರೂ ತೆರಿಗೆ ಸಂಗ್ರಹವಾಗುವ ಸಾಧ್ಯತೆ ಇದೆ ಎಂದು ಪರಿಷತ್ತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮೇಲ್ಮನೆಯಲ್ಲಿಂದು ಸದಸ್ಯ ವೈ. ಎ. ನಾರಾಯಣ ಸ್ವಾಮಿ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಯವರು ಕಳೆದ ಸಾಲಿನಲ್ಲಿ 1323 ಕೋಟಿ ರೂ ತೆರಿಗೆ ಸಂಗ್ರಹಿಸಲಾಗಿತ್ತು. ಈ ವರ್ಷ ತೆರಿಗೆ ಸಂಗ್ರಹ ದ್ವಿಗುಣಗೊಳ್ಳಲಿದೆ. ಆರ್ಥಿಕ ವರ್ಷಾಂತ್ಯಕ್ಕೆ 2900 ಕೋಟಿ ರೂ ತೆರಿಗೆ ಸಂಗ್ರಹದ ಗುರಿ ಹೊಂದಲಾಗಿದೆ ಎಂದು ತಿಳಿಸಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತೆರಿಗೆ ವಸೂಲಿಯಲ್ಲಿ ಹಿಂದೆ ಉಳಿದಿದೆ. ಪಾಲಿಕೆ ವ್ಯಾಪ್ತಿಯ 16 ಲಕ್ಷ ಆಸ್ತಿಗಳಿದ್ದು, ಕೇವಲ 14 ಲಕ್ಷ ಆಸ್ತಿಗಳಿಂದ ಮಾತ್ರ ತೆರಿಗೆ ಸಂಗ್ರಹವಾಗುತ್ತಿದೆ. 2 ಲಕ್ಷ ಆಸ್ತಿಗಳಿಗೆ ತೆರಿಗೆ ವಿಧಿಸಿರುವುದಿಲ್ಲ. ಮಾಲೀಕತ್ವ ಇತರ ಗೊಂದಲಗಳಿಂದ ತೆರಿಗೆ ವಸೂಲಿ ಮಾಡುತ್ತಿಲ್ಲವೆಂದು ಅಧಿಕಾರಿಗಳು ತಿಳಿಸಿದ್ದಾರೆ. ಆದರೆ ಈ ಆಸ್ತಿಗಳಿಗೆ ರಸ್ತೆ, ನೀರು, ಒಳಚರಂಡಿ ಸೇರಿದಂತೆ ಎಲ್ಲಾ ಮೂಲಭೂತ ಸೌಲಭ್ಯವನ್ನು ಕಲ್ಪಸಲಾಗಿದೆ. ಈ ಕುರಿತಂತೆ ಈಗಾಗಲೇ ಅಧಿಕಾರಿಗಳ ಸಭೆ ನಡೆಸಿ ಸ್ಪಷ್ಟ ನಿರ್ದೇಶನ ನೀಡಿ, ಎಲ್ಲಾ ಆಸ್ತಿಗಳಿಗೆ ತೆರಿಗೆ ವಿಧಿಸುವಂತೆ ಸೂಚಿಸಲಾಗಿದೆ.

ಸದಸ್ಯರ ಅಭಿಪ್ರಾಯದಂತೆ ತೆರಿಗೆ ಸಂಗ್ರಹ ಕುರಿತಂತೆ ಹೊಸ ತಂತ್ರಾಂಶ ಅಭಿವೃದ್ಧಿ ಒಳಗೊಂಡಂತೆ ತೆರಿಗೆ ಸಂಗ್ರಹ ಸುಧಾರಣೆಗಾಗಿ ತಜ್ಞರನ್ನೊಳಗೊಂಡ ಸಮಿತಿ ರಚಿಸಲು ಪರಿಶೀಲಿಸಲಾಗುವುದೆಂದು ಮುಖ್ಯಮಂತ್ರಿ ಅವರು ತಿಳಿಸಿದರು.

# ರೇಷ್ಮೆ ಉದ್ಯಮ ಹಾಗೂ ಕೃಷಿ ಅಭಿವೃದ್ಧಿಗೆ ಕಾಯಕಲ್ಪ

-:ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ:ಡಿಸೆಂಬರ್:18:(ಕರ್ನಾಟಕ ವಾರ್ತೆ):-**

ಜಗದ್ವಿಖ್ಯಾತ ಮೈಸೂರು ರೇಷ್ಮೆ ಸೀರೆ ಉದ್ಯಮ ಹಾಗೂ ರೇಷ್ಮೆ ಕೃಷಿ ಅಭಿವೃದ್ಧಿಗೆ ಸರ್ಕಾರ ಎಲ್ಲ ಕ್ರಮ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಮೇಲ್ಮನೆಯಲ್ಲಿಂದು ಸದಸ್ಯ ಪಟೇಲ್ ಶಿವರಾಂ ಅವರ ಪ್ರಶ್ನೆಗೆ ಉತ್ತರಿಸಿದ ರೇಷ್ಮೆ ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೇಷ್ಮೆ ಉದ್ಯಮ ಅಭಿವೃದ್ಧಿಗಾಗಿ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಗೆ ನೂಲು ಖರೀದಿಗೆ 30 ಕೋಟಿ ರೂಗಳನ್ನು ಅನುದಾನ ಒದಗಿಸಲು ಉದ್ದೇಶಿಸಲಾಗಿದೆ. ಇದರಿಂದ ರೇಷ್ಮೆ ಗೂಡಿಗೆ ಅನುಕೂಲಕರ ಬೆಲೆ ದೊರೆಯಲಿದೆ. ಇದರಿಂದ ರೇಷ್ಮೆ ಬೆಳೆಗೆ ಉತ್ತೇಜನ ನೀಡಿದಂತ್ತಾಗುತ್ತದೆ ಎಂದರು.

ರಾಜ್ಯದಲ್ಲಿ 87004 ಹೆಕ್ಟೇರ್ ಹಿಪ್ಪು ನೇರಳೆ ಬೇಸಾಯವಿದೆ. ರೇಷ್ಮೆ ಅಭಿವೃದ್ಧಿಗೆ ಸರ್ಕಾರ ಹನಿ ನೀರಾವರಿ ಅಳವಡಿಕೆಗೆ ಶೇಕಡ 90 ರಷ್ಟು ಸಹಾಯಧನ, ಮಣ್ಣಿನ ಫಲವತ್ತತೆ ಹೆಚ್ಚಳ, ರೇಷ್ಮೆ ಗೂಡಿ ಪ್ರೋತ್ಸಾಹ ಧನ, ತಾಂತ್ರಿಕತೆ ಅಳವಡಿಕೆಗೆ ತರಬೇತಿಯನ್ನು ಒಳಗೊಂಡಂತೆ ಹಲವು ನೆರವುಗಳನ್ನು ನೀಡುವುದರ ಮೂಲಕ ಸರ್ಕಾರವು ರೇಷ್ಮೆ ಕೃಷಿಗೆ ಪ್ರೋತ್ಸಾಹವನ್ನು ನೀಡುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಯೋಜನೆ ಹಾಗೂ ರಾಷ್ಟ್ರೀಯ ಕೃಷಿ ಅಭಿಯಾನದಡಿ 10,527 ಹೆಕ್ಟೆರ್ ಹಿಪ್ಪೆ ನೇರಳೆ ತೋಟಕ್ಕೆ ಹನಿ ನೀರಾವರಿ ಸೌಲಭ್ಯ ಕಲ್ಪಿಸಲು 24.94 ಕೋಟಿ ರೂ ಒದಗಿಸಲಾಗಿದೆ. ಹಾಗೂ ಮೈಸೂರು ರೇಷ್ಮೇ ಸೀರೆಗಳ ಉತ್ಪಾದನೆಗೆ ಸರ್ಕಾರದ ವತಿಯಿಂದ ಎಲ್ಲಾ ರೀತಿಯಿಂದಲೂ ಪ್ರೋತ್ಸಾಹವನ್ನು ನೀಡಲಾಗುವುದೆಂದು ಮುಖ್ಯಮಂತ್ರಿಯವರು ತಿಳಿಸಿದರು.